**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರ ನಿಯಮ-330ರಡಿ ಪ್ರಸ್ತಾಪಿಸಿರುವ ವಿಷಯ ಕುರಿತಂತೆ ಉತ್ತರ ನೀಡುವ ಕುರಿತು**

******

**ವಿಷಯ:**

ವಿಶ್ವವಿದ್ಯಾನಿಲಯಗಳಲ್ಲಿ ಶೇಕಡ 70%ರಷ್ಟು ಅಧ್ಯಾಪಕ ಮತ್ತು ಬ್ಯಾಕ್ ಲಾಗ್ ಹುದ್ದೆಗಳನ್ನು ಭರ್ತಿ ಮಾಡದೆ ಇರುವುದರಿಂದ ಯು.ಜಿ.ಸಿ.ಯಿಂದ ಯಾವುದೇ ಅನುದಾನ ದೊರೆಯುತ್ತಿಲ್ಲ. ರಾಜ್ಯ ಸರ್ಕಾರದ ಇತ್ತೀಚಿನ ಆದೇಶದಂತೆ ವಿದ್ಯಾರ್ಥಿಗಳ ಶುಲ್ಕದಿಂದಲೇ ವಿಶ್ವವಿದ್ಯಾನಿಲಯಗಳನ್ನು ನಡೆಸುವಂತೆ ತಿಳಿಸಿರುವುದರಿಂದ ವಿ.ವಿ.ಗಳು ಆರ್ಥಿಕ ಸಂಕಷ್ಟದಿಂದ ಬೋಧನೆ, ಸಂಶೋಧನೆ ಹಾಗೂ ಗುಣಮಟ್ಟದ ಶಿಕ್ಷಣ ನೀಡಲು ತುಂಬಾ ತೊಂದರೆ ಉಂಟಾಗಿದೆ. ಸರ್ಕಾರ ವಿದ್ಯಾರ್ಥಿಗಳ ಪರವಾಗಿ ವಿ.ವಿ.ಗಳಿಗೆ ಮರು: ಬರಿಸುವಿಕೆ ಹಣವು ಸಕಾಲದಲ್ಲಿ ದೊರೆಯುತ್ತಿಲ್ಲ. ಪ್ರತಿ ವರ್ಷ ವಿದ್ಯಾರ್ಥಿಗಳಿಂದ ಶೇಕಡ 10ಕ್ಕಿಂತ ಹೆಚ್ಚು ಶುಲ್ಕಗಳನ್ನು ಪಡೆಯುತ್ತಿರುವುದರಿಂದ ವಿದ್ಯಾರ್ಥಿಗಳಿಗೆ ತುಂಬಾ ಹೊರೆಯಾಗುತ್ತಿದೆ. ವಿ.ವಿ. ನೌಕರರ ಪಿಂಚಣಿ ಹಣವನ್ನು ಸಹ ಸಂಪೂರ್ಣವಾಗಿ ರಾಜ್ಯ ಸರ್ಕಾರ ಭರಿಸುತ್ತಿಲ್ಲ. ಖಾಲಿ ಹುದ್ದೆಗಳಿಗೆ ಎದುರಾಗಿ ನೇಮಕ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರಿಗೂ ಸರ್ಕಾರ ವೇತನ ನೀಡುತ್ತಿಲ್ಲ. ಈ ಎಲ್ಲಾ ಕಾರಣಗಳಿಂದ ವಿ.ವಿ.ಗಳಲ್ಲಿ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ಹಾಗೂ ಸಂಶೋಧನೆಗೆ ತುಂಬಾ ಅಡ್ಡಿ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಉನ್ನತ ಶಿಕ್ಷಣ ಸಚಿವರಲ್ಲಿ ಪ್ರಸ್ತಾಪಿಸಬಯಸುತ್ತೇನೆ.

**ಉತ್ತರ:**

ವಿಶ್ವವಿದ್ಯಾಲಯದ ಕಾಲೇಜುಗಳಲ್ಲಿ ಬೋಧಕ ಮತ್ತು ಇತರೆ ಶೈಕ್ಷಣಿಕ ಸಿಬ್ಬಂದಿಯ ನೇಮಕಾತಿ ಕ್ರಮವಿಧಾನಗಳು, ನೇಮಕಾತಿಗೆ ಅವಶ್ಯವಾಗುವ ಕನಿಷ್ಠ ವಿದ್ಯಾರ್ಹತೆ , ಸೇವಾಷರತ್ತುಗಳು ಹಾಗೂ ಶಿಕ್ಷಣದ ಗುಣಮಟ್ಟ ನಿರ್ವಹಣೆ/ಸಂರಕ್ಷಣೆಗೆ ಅಗತ್ಯವಾದ ಕ್ರಮಗಳು/ಮಾರ್ಗೋಪಾಯಗಳ ಸಂಬಂಧದಲ್ಲಿ ಆರ್ಥಿಕ ಇಲಾಖೆ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ ಹಾಗೂ ಕಾನೂನು ಇಲಾಖೆಗಳ ಅಭಿಪ್ರಾಯ/ಸಲಹೆಗಳಿಗೆ ಅನುಗುಣವಾಗಿರುವಂತೆ ವಿಶ್ವವಿದ್ಯಾಲಯ ಧನಸಹಾಯ ಆಯೋಗದ (ಯುಜಿಸಿ) ದಿನಾಂಕ:18.07.2019ರ ಅಧಿಸೂಚನೆಯನ್ವಯ ಜಾರಿಗೊಳಿಸಲಾದ 2018ರ ವಿನಿಯಮಗಳನ್ನು ಅಳವಡಿಸಿಕೊಂಡು ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಿಗೆ ಪರಿನಿಯಮಗಳನ್ನು ರಚಿಸಿಕೊಳ್ಳಲು ಸರ್ಕಾರದಿಂದ ಸೂಚಿಸಲಾಗಿರುವಂತೆ ವಿಶ್ವವಿದ್ಯಾಲಯಗಳು ಸಕ್ಷಮ ಪ್ರಾಧಿಕಾರದ ಅನುಮೋದನೆಯೊಂದಿಗೆ ಪರಿನಿಯಮವನ್ನು ರಚಿಸಿ ಸರ್ಕಾರಕ್ಕೆ ಸಲ್ಲಿಸುತ್ತಿದ್ದು, ಮಾನ್ಯ ರಾಜ್ಯಪಾಲರ ಅನುಮೋದನೆಗೆ ಸಲ್ಲಿಸುವ ಪೂರ್ವದ ಕ್ರಮವಾಗಿ ಪರಿನಿಯಮಗಳು ನಿಯಮಾನುಸಾರವಿರುವ ಕುರಿತಂತೆ ಪರಿಶೀಲನೆಯಲ್ಲಿರುತ್ತದೆ. , ಬೋಧಕ ಹುದ್ದೆಗಳನ್ನು ಭರ್ತಿ ಮಾಡುವವರೆಗೆ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಅತಿಥಿ ಉಪನ್ಯಾಸಕರುಗಳಿಂದ ಬೋಧನ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ.

ಉನ್ನತ ಶಿಕ್ಷಣ ಇಲಾಖೆಯಲ್ಲಿನ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಬೋಧಕೇತರ ಬ್ಯಾಕ್ ಲಾಗ್ ಹುದ್ದೆಗಳನ್ನು ಭರ್ತಿಮಾಡಲು ಸರ್ಕಾರಕ್ಕೆ ಸ್ವೀಕೃತಗೊಂಡ ಕೋರಿಕೆಗಳನ್ನು ಪರಿಗಣಿಸಿ ಅಗತ್ಯ ಕ್ರಮಕೈಗೊಳ್ಳುವಂತೆ ವಿಶ್ವವಿದ್ಯಾಲಯಗಳಿಗೆ ನಿರ್ದೇಶನ ನೀಡಲಾಗಿರುತ್ತದೆ. ಬೋಧಕ ಹುದ್ದೆಗಳನ್ನು

ಭರ್ತಿ ಮಾಡುವ ಸಂಬಂಧ ಪರಿನಿಯಮಾವಳಿಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುವುದರಿಂದ, ಈ ಪರಿನಿಯಮಾವಳಿ ಅಂತಿಮಗೊಂಡ ನಂತರದಲ್ಲಿ ಬೋಧಕ ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿಗೆ ಕ್ರಮ ವಹಿಸಲಾಗುವುದು. ವಿದ್ಯಾರ್ಥಿಗಳ ಶುಲ್ಕದಿಂದಲೇ ವಿಶ್ವವಿದ್ಯಾನಿಲಯಗಳನ್ನು ನಡೆಸುವಂತೆ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಡಿ ಬರುವ ವಿಶ್ವವಿದ್ಯಾಲಯಗಳಿಗೆ ಸೂಚನೆ ನೀಡಿರುವುದಿಲ್ಲ. ಉನ್ನತ ಶಿಕ್ಷಣ ಇಲಾಖೆಯಡಿ ಬರುವ ವಿಶ್ವವಿದ್ಯಾಲಯಗಳು ಹಾಗೂ ಸಂಸ್ಥೆಗಳಿಗಳಿಗೆ ಸರ್ಕಾರಿ ವಿಶ್ವವಿದ್ಯಾಲಯಗಳಿಗೆ ಪ್ರತಿ ವರ್ಷದಲ್ಲಿ ಆಯವ್ಯಯ ಹಂಚಿಕೆ ಹಾಗೂ ಆರ್ಥಿಕ ಇಲಾಖೆಯ ಅಧಿಕಾರ ಪ್ರತ್ಯಾಯೋಜನೆಯಂತೆ ವಿಶ್ವವಿದ್ಯಾಲಯವಾರು ಸಂದರ್ಭಾನುಸಾರವಾಗಿ ಅನುದಾನ ಬಿಡುಗಡೆ ಮಾಡಲಾಗುತ್ತಿದೆ. 2022-23ನೇ ಆರ್ಥಿಕ ಸಾಲಿನಲ್ಲಿ ವೇತನ ಮತ್ತು ವಿಶ್ರಾಂತಿ ವೇತನಕ್ಕಾಗಿ ತ್ರೈಮಾಸಿಕ ಕಂತುಗಳಲ್ಲಿ ಬಿಡುಗಡೆ ಮಾಡಿರುವ ಅನುದಾನದ ಮಾಹಿತಿಯನ್ನು ಇದರೊಂದಿಗೆ ಲಗತ್ತಿದೆ.

ಅತಿಥಿ ಉಪನ್ಯಾಸಕರುಗಳಿಗೆ ಗೌರವ ಧನವನ್ನು, ಯುಜಿಸಿಯ ದಿನಾಂಕ:28.01.2019ರಂದು ಹೊರಡಿಸಿರುವ ಮಾರ್ಗಸೂಚಿಯನ್ವಯ ವಿದ್ಯಾರ್ಹತೆ ಹಾಗೂ ಕಾರ್ಯಭಾರಕ್ಕನುಗುಣವಾಗಿ ಸಾರ್ವಜನಿಕ ವಿಶ್ವವಿದ್ಯಾಲಯಗಳು ಪಾವತಿಸುತ್ತಿವೆ ಹಾಗೂ ಸರ್ಕಾರದಿಂದ ಬಿಡುಗಡೆಯಾಗುವ ಅನುದಾನವನ್ನು ಅವಲಂಬಿಸದೇ, ವಿಶ್ವವಿದ್ಯಾಲಯಗಳೂ ಸಹ ಆಂತರಿಕ ಸಂಪನ್ಮೂಲ ಕ್ರೋಢೀಕರಣಕ್ಕೆ ಹೆಚ್ಚು ಒತ್ತನ್ನು ನೀಡುವಂತೆ ಹಲವಾರು ಬಾರಿ ವಿಶ್ವವಿದ್ಯಾಲಯಗಳಿಗೆ ನಿರ್ದೇಶಿಸಲಾಗಿರುತ್ತದೆ.

**(ಇಡಿ 118 ಯುಎನ್‌ಇ 2023)**

**(ಡಾ ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು